ಮೀನುಗಾರರಿಗೆ ವಸತಿ ಸೌಕರ್ಯ

611 - ಶ್ರೀ ಕೆ.ಎಸ್. ಪುಟ್ಟಣ್ಣಯ್ಯ (ಪಾಂಡವಪುರ) : ಮಾನ್ಯ ಮೀನುಗಾರಿಕೆ ಮತ್ತು ಬಂದರು ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) *ಪಾಂಡವಪುರ ತಾಲ್ಲೂಕು ಕೆರೆ ತೊಣ್ಣೂರು ಹಾಗೂ ಸುತ್ತಮುತ್ತಲ ಗ್ರಾಮಗಳಲ್ಲಿ ಹೆಚ್ಚು ಮೀನುಗಾರರಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?*

ಆ) *ಹಾಗಿದ್ದಲ್ಲಿ, ಮೀನುಗಾರರಿಗೆ ವಸತಿ ಸೌಕರ್ಯವನ್ನು ನೀಡುವ ಆಲೋಚನೆ ಸರ್ಕಾರಕ್ಕೆ ಇದೆಯೇ?*

ಇ) *ಇದ್ದಲ್ಲ, ಎಷ್ಟು ದಿನಗಳೊಳಗೆ ಈ ಸಮಸ್ಯೆಯನ್ನು ಬಗೆಹರಿಸಲಾಗುವುದು?*

ಶ್ರೀ ಕೆ. ಜಯಪ್ರಕಾಶ್ ಹೆಗ್ಡೆ (ಮೀನನುಗಾರಿಕೆ ಮತ್ತು ಬಂದರು ರಾಜ್ಯ ಸಚಿವರು) :

ಅ) ಹೌದು

ಆ) ಸದರಿ ಗ್ರಾಮಗಳ ಮೀನುಗಾರರಿಂದ ಬೇಡಿಕೆ ಬಂದಾಗ ಪರಿಗಣಿಸಲಾಗುವುದು.

ಇ) ಪ್ರಶ್ನೆ ಉದ್ಭವಿಸುವುದಿಲ್ಲ.

ಗ್ರಾಮದಲ್ಲಿ ಆಹಾರ ಮತ್ತು ನಾಗರೀಕ ಸರಬರಾಜು ಮಾಡುವ ಬಗ್ಗೆ

684 - ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಕುಂದಾಪುರ) : ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) *ರಾಜ್ಯದಲ್ಲಿ ಆಹಾರ ಮತ್ತು ನಾಗರೀಕ ಸರಬರಾಜನ್ನು ಆಯಾಯ ಗ್ರಾಮದಲ್ಲಿ ವಿತರಣೆ ಮಾಡುವ ವ್ಯವಸ್ಥೆ ಮಾಡಲಾಗಿದೆಯೇ?*

ಆ) *ಬಹಳಷ್ಟು ಗ್ರಾಮಗಳಿಂದ ತಮ್ಮ ಗ್ರಾಮದಲ್ಲೇ ವಿತರಣೆ ಮಾಡಬೇಕೆಂಬ ಬೇಡಿಕೆಯಿದ್ದರೂ ವಿತರಣೆ ಮಾಡದಿರಲು ಕಾರಣವೇನು?*

ಶ್ರೀ ಎಸ್. ನಂಜಪ್ಪ (ಆಹಾರ ಮತ್ತು ನಾಗರೀಕ ಸರಬರಾಜು ಸಚಿವರು) :

ಅ) ಹೌದು

ಆ) ಇಂತಹ ಪ್ರಸಂಗಗಳು ಸರ್ಕಾರದ ಗಮನಕ್ಕೆ ಬಂದಿರುವುದಿಲ್ಲ. ಆದರೆ ನಗರ ಪ್ರದೇಶದಲ್ಲಿ ಕನಿಷ್ಟ 500 ಪಡಿತರ ಚೀಟಿ ಹಾಗೂ ಗ್ರಾಮೀಣ ಪ್ರದೇಶದಲ್ಲಿ 350 ಪಡಿತರ ಚೀಟಿಗಳಿಗೆ ಒಂದು ನ್ಯಾಯ ಬೆಲೆ ಅಂಗಡಿ ಮಂಜೂರು ಮಾಡುವಂತೆ ಸೂಚಿಸಲಾಗಿತ್ತು, ಒಂದು ವೇಳೆ ಅದಕ್ಕಿಂತ ಕಾರ್ಡುದಾರರ ಸಂಖ್ಯೆ ಕಡಿಮೆ ಇದ್ದರೂ ಸಹ ಕಾರ್ಡುದಾರರ ಹಿತವನ್ನು ಗಮನದಲ್ಲಿರಿಸಿಕೊಂಡು ನಿಗಧಿತ ಸಂಖ್ಯೆಗಿಂತ ಕಡಿಮೆ ಪಡಿತರ ಚೀಟಿದಾರರಿದ್ದರೂ ಸಹ ನ್ಯಾಯಬೆಲೆ ಅಂಗಡಿಗಳನ್ನು ಸ್ಥಾಪಿಸುವ ಕ್ರಮ ಕೈಗೊಳ್ಳುವಂತೆ ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳಿಗೆ ಈಗಾಗಲೇ ಸೂಚನೆ ನೀಡಲಾಗಿದೆ.

ದೋಣಿ ವ್ಯವಸ್ಥೆ ಕುರಿತು

685 - ಶ್ರೀ ಪ್ರತಾಪ್ ಚಂದ್ರಶೆಟ್ಟಿ ಕೆ. (ಕುಂದಾಪುರ) : ಮಾನ್ಯ ಮೀನುಗಾರಿಕೆ ಮತ್ತು ಬಂದರು ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) *ಉಡುಪಿ ತಾಲ್ಲೂಕು ನಂಜೂರು ಗ್ರಾಮದ ಅನೆಗುಂದಿ ಹೊಳೆಗೆ ಬಂದರು ಮತ್ತು ಒಳನಾಡು ಸಾರಿಗೆ ವ್ಯವಸ್ಥೆಯಿಂದ ದೋಣಿ ವ್ಯವಸ್ಥೆ ಮಾಡಿರುವುದು ನಿಜವೇ?*